**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಸಿ. ಸಿ. ನಂ. 69/2023**

**ಚಾ.ಸಾಃ 16, ಫ್ರಾ.ಸಾಃ 5**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ವೈಲೇಟ್ ಫೇಮಿನಾ |
| ಗಂಡನ ಹೆಸರು | ಡೇವಿಡ್ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಪೊಲೀಸ್– ಉಪ ನಿರೀಕ್ಷಕರು, ಸಿ ಎಸ್ ಪಿ ಮಲ್ಪೆ |
| ವಾಸ್ತವ್ಯ | ಮಣಿಪಾಲ |

**ಸಾಕ್ಷಿಯನ್ನು ದಿನಾಂಕಃ 07–02–2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 03–02–2023 ರಿಂದ 10–07–2023 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ–ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 28–04–2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 10–45 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.78/2023 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ–1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ–10 ಎಂದು, ಸಾಕ್ಷಿ ಸಹಿಯನ್ನು ನಿಪಿ–10(ಎ) ಎಂದು ಗುರುತಿಸಲಾಯಿತು.

ದಿನಾಂಕ 29–04–2023 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಚಾಸಾ–1 ರವರು ತೋರಿಸಿದ ಸ್ಥಳದಲ್ಲಿ ಚಾ.ಸಾ. 2 ಮತ್ತು 3 ರವರ ಸಮಕ್ಷಮ ಬೆಳಿಗ್ಗೆ 08–00 ರಿಂದ 09–30 ಗಂಟೆ ಸಮಯದಲ್ಲಿ ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆ ತಯಾರಿಸಿ ಸ್ಥಳದ ಫೋಟೋ ತೆಗೆಸಿರುತ್ತೇನೆ. ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ–2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ–2(ಸಿ) ಎಂದು, ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ಅದನ್ನು ನಿಪಿ–3 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ–3(ಸಿ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ–4 ರಿಂದ 7 ಎಂದು ಗುರುತಿಸಲಾಗಿದೆ.

ಅದೇ ದಿನ ಚಾ.ಸಾ. 6 ರವರ ಹೇಳಿಕೆಯನ್ನು ಪಡೆದಿರುತ್ತೇನೆ.

ದಿನಾಂಕಃ 30–04–2023 ಚಾಸಾ–14 ರವರಿಂದ ಕಲಂ 65–ಬಿ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಅದನ್ನು ನೋಡುತ್ತಿದ್ದು ನಿಪಿ–11 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿ.ಪಿ. 11(ಎ) ಗುರುತಿಸಲಾಯಿತು.

ನಂತರ ಕೇಸಿನ ಕಡತವನ್ನು ಮುಂದಿನ ತನಿಖೆಗಾಗಿ ಚಾ.ಸಾ. 17 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಶ್ರೀಮತಿ ವಿ. ಎಮ್.ಎನ್. ವಕೀಲರು ಎ ಎಲ್ ಎ ಡಿ ಸಿ ಕಾರವಾರ ರಿಂದಃ**

ದೂರು ಕೊಡಲು ಫಿರ್ಯಾದಿ ಒಬ್ಬರೇ ಬಂದಿದ್ದರು. ಗಾಯಾಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ನಾನು ಸ್ಥಳಕ್ಕೆ ಹೋದಾಗ ಅಪಘಾತಕ್ಕೊಳಗಾಗಿದ್ದ ಎರಡು ಬೈಕುಗಳನ್ನು ರಸ್ತೆಯ ಪಕ್ಕಕ್ಕೆ ನಿಲ್ಲಿಸಲಾಗಿತ್ತು. ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ಪೊಲೀಸ್ ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಸ್ಥಳದಲ್ಲಿ ರಕ್ತ ಬಿದ್ದಿದ್ದು ಕಂಡುಬಂದಿರುವುದಿಲ್ಲ. ಪಂಚರಿಗೆ ನೋಟೀಸ್ ಕೊಟ್ಟು ಸ್ಥಳಕ್ಕೆ ಬರಮಾಡಿಕೊಂಡಿರುತ್ತೇನೆ. ಗಾಯಾಳುಗಳ ಕಟುಂಬದವರಿಗೆ ಸಹಾಯವಾಗಲಿ ಎಂಬ ಕಾರಣಕ್ಕೆ ಸುಳ್ಳು ದೂರು ಪಡೆದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**